**All India Radio: Bangalore**
**National Bulletin In Kannada**

**18.09.2026 07.35 a.m.**

ಮುಖ್ಯಾಂಶಗಳು

೧. ಜಾಗತಿಕ ಸೆಮಿಕಂಡಕ್ಟರ್ ಉತ್ಪಾದನಾ ಕೇಂದ್ರವಾಗಿ ಭಾರತ ಪರಿವರ್ತನೆ - ಪ್ರಧಾನಿ ನರೇಂದ್ರ ಮೋದಿ

೨. ಎಚ್‌ಎಎಲ್‌ನಿಂದ ಭಾರತೀಯ ವಾಯುಪಡೆಗೆ ಇಂದು ತೇಜಸ್ ಹಾಗೂ ಎಚ್‌ಟಿಟಿ ೪೦ ತರಬೇತಿ ವಿಮಾನಗಳ ಹಸ್ತಾಂತರ

೩. ಇಂಧನ ಭದ್ರತೆ ಹಾಗೂ ಆರ್ಥಿಕ ಹಿತಾಸಕ್ತಿ ರಕ್ಷಣೆಗೆ ಭಾರತ ಬದ್ಧ -ವಿದೇಶಾಂಗ ಸಚಿವಾಲಯ

೪. ಟಿ-೨೦ ಕ್ರಿಕೆಟ್; ಅಫ್ಘಾನಿಸ್ತಾನ ವಿರುದ್ಧ ಭಾರತಕ್ಕೆ ೩-೦ ಅಂತರದಲ್ಲಿ ಸರಣಿ ಜಯ

****************

ಪೂರೈಕೆ ಸರಪಳಿಗಳನ್ನು ಅಸ್ತ್ರವಾಗಿ ಬಳಸುತ್ತಿರುವ ಜಾಗತಿಕ ಪರಿಸ್ಥಿತಿಯ ನಡುವೆ ಭಾರತವನ್ನು ವಿಶ್ವಾಸಾರ್ಹ ಸೆಮಿಕಂಡಕ್ಟರ್ ತಯಾರಿಕಾ ಕೇಂದ್ರವಾಗಿ ರೂಪಿಸಲಾಗುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ನವದೆಹಲಿಯ ಯಶೋಭೂಮಿಯಲ್ಲಿ ನಿನ್ನೆ ನಡೆದ ಸೆಮಿಕಾನ್ ಇಂಡಿಯಾದ ಐದನೇ ಆವೃತ್ತಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಜಗತ್ತು ಹೊಸ ಹಾಗೂ ವಿಶ್ವಾಸಾರ್ಹ ತಯಾರಿಕಾ ತಾಣಗಳನ್ನು ಎದುರು ನೋಡುತ್ತಿದೆ. ಈ ಅಗತ್ಯವನ್ನು ಪೂರೈಸಲು ಭಾರತ ಸತತವಾಗಿ ಸಜ್ಜಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ನಿರ್ಣಾಯಕ ಕೈಗಾರಿಕೆಗಳಲ್ಲಿನ ಭಾರತದ ಬೆಳವಣಿಗೆಯು ಜಾಗತಿಕ ಪೂರೈಕೆ ಸರಪಳಿಗಳನ್ನು ಬಲಪಡಿಸುವುದರ ಜೊತೆಗೆ, ವಿಶ್ವದಾದ್ಯಂತ ಬದಲಾಗುತ್ತಿರುವ ಪೂರೈಕೆ ಸರಪಳಿ ಸವಾಲುಗಳ ನಡುವೆಯೂ ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ ಎಂದು ಪ್ರಧಾನಿ ಹೇಳಿದ್ದಾರೆ.

****************

ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಬೆಂಗಳೂರಿನಲ್ಲಿ ಇಂದು ಭಾರತೀಯ ವಾಯುಪಡೆಗೆ ಲಘು ಯುದ್ಧ ವಿಮಾನ, ತೇಜಸ್ ತರಬೇತಿ ವಿಮಾನಗಳು ಮತ್ತು ೪೦ ಎಚ್‌ಟಿಟಿ ತರಬೇತಿ ವಿಮಾನಗಳನ್ನು ಹಸ್ತಾಂತರಿಸಲಿದೆ.

ಸಾರ್ವಜನಿಕ ವಲಯದ ಉದ್ಯಮವಾದ ಪವನ್ ಹ್ಯಾನ್ಸ್ ಲಿಮಿಟೆಡ್‌ಗೆ ಧ್ರುವ್ ಮುಂದಿನ ಪೀಳಿಗೆಯ ಹೆಲಿಕಾಪ್ಟರ್‌ಗಳನ್ನು ಹಸ್ತಾಂತರಿಸಲಿದೆ. ಸಮಾರಂಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಭಾಗವಹಿಸಲಿದ್ದಾರೆ.

ಈ ವೇದಿಕೆಗಳ ಸೇರ್ಪಡೆಯು ಸ್ಥಳೀಯ ಸಾಮರ್ಥ್ಯಗಳನ್ನು ಬಲಪಡಿಸುವ ಮತ್ತು ವಿದೇಶಿ ಮೂಲಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವತ್ತ ಮತ್ತೊಂದು ಹೆಜ್ಜೆಯಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

****************

ತಮ್ಮ ಆರ್ಥಿಕ ಹಿತಾಸಕ್ತಿಗಳನ್ನು ರಕ್ಷಿಸಲು ಹಾಗೂ ಇಂಧನ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳುವುದಾಗಿ ಭಾರತ ತಿಳಿಸಿದೆ.

೧೪೦ ಕೋಟಿ ಜನರ ಇಂಧನ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಭಾರತ ಬದ್ಧವಾಗಿದೆ. ವೈವಿಧ್ಯಮಯ ಮೂಲಗಳಿಂದ ಇಂಧನ ಪೂರೈಕೆ ಪಡೆಯುವ ಮೂಲಕ ಹಾಗೂ ಬದಲಾಗುತ್ತಿರುವ ಮಾರುಕಟ್ಟೆ ಪರಿಸ್ಥಿತಿಗಳಿಗೆ ಅನುಗುಣವಾಗಿ ಈ ಬದ್ಧತೆಯನ್ನು ಮುಂದುವರಿಸಲಾಗುವುದು ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ರಷ್ಯಾದ ಕಚ್ಚಾ ತೈಲವನ್ನು ಖರೀದಿಸುವ ದೇಶಗಳ ಮೇಲೆ ಶೇಕಡಾ ೧೦೦ರವರೆಗೆ ಸುಂಕ ವಿಧಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಅವಕಾಶ ನೀಡುವ ಮಸೂದೆಯನ್ನು ಅಮೆರಿಕದ ಪ್ರತಿನಿಧಿಗಳ ಸಭೆ ಅಂಗೀಕರಿಸಿದ ಹಿನ್ನೆಲೆಯಲ್ಲಿ ಭಾರತ ಈ ಹೇಳಿಕೆ ನೀಡಿದೆ.

****************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಮಹಾರಾಷ್ಟ್ರಕ್ಕೆ ಭೇಟಿ ನೀಡಲಿದ್ದಾರೆ.

ತಮ್ಮ ಭೇಟಿಯ ಸಂದರ್ಭದಲ್ಲಿ ಅವರು ಮುಂಬೈ, ಲೋನಾವಾಲಾ ಮತ್ತು ಪುಣೆಯಲ್ಲಿ ನಡೆಯಲಿರುವ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಪುಣೆ ಜಿಲ್ಲೆಯ ಲೋನಾವಾಲಾದಲ್ಲಿರುವ ಕೈವಲ್ಯಧಾಮದ 'ಗೋರ್ಧನ್‌ದಾಸ್ ಸೆಕ್ಸಾರಿಯಾ ಕಾಲೇಜ್ ಆಫ್ ಯೋಗ ಅಂಡ್ ಕಲ್ಚರಲ್ ಸಿಂಥೆಸಿಸ್'ನ ಅಮೃತ ಮಹೋತ್ಸವ ಸಮಾರಂಭದಲ್ಲಿ ಉಪರಾಷ್ಟ್ರಪತಿಯವರು ಭಾಗವಹಿಸಲಿದ್ದಾರೆ. ನಂತರ ಸಂಜೆ, ನೆಹರು ಕ್ರೀಡಾಂಗಣದಲ್ಲಿ ನಡೆಯಲಿರುವ 'ಪುಣೆ ಉತ್ಸವ'ದಲ್ಲಿ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

****************

ವಿಕಸಿತ ಭಾರತದತ್ತ ಭಾರತದ ಪಯಣಕ್ಕೆ ಅಗತ್ಯವಿರುವ ಹಣಕಾಸು ಒದಗಿಸುವ ಕುರಿತು ಎರಡು ದಿನಗಳ ಸಮ್ಮೇಳನವನ್ನು ಕೇಂದ್ರ ಹಣಕಾಸು ಸಚಿವಾಲಯ ಇಂದಿನಿಂದ ನವದೆಹಲಿಯಲ್ಲಿ ಆಯೋಜಿಸಲಿದೆ.

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಹಣಕಾಸು ಸಚಿವರು ಹಾಗೂ ಹಣಕಾಸು ಕಾರ್ಯದರ್ಶಿಗಳು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸೇರಿದಂತೆ ಹಲವು ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಹಣಕಾಸು ಸಚಿವರು ಪಾಲ್ಗೊಳ್ಳಲಿದ್ದಾರೆ.

****************

ಪಶ್ಚಿಮ ಬಂಗಾಳದಲ್ಲಿ ನಡೆಯಲಿರುವ ವಿಧಾನಸಭಾ ಉಪಚುನಾವಣೆ ಹಿನ್ನೆಲೆಯಲ್ಲಿ, ಅಖಿಲ ಭಾರತ ತೃಣಮೂಲ ಕಾಂಗ್ರೆಸ್‌ನ ಎರಡು ಬಣಗಳು ಪಕ್ಷದ ಹೆಸರು ಮತ್ತು 'ಹೂವು ಮತ್ತು ಹುಲ್ಲು' ಚಿಹ್ನೆಯನ್ನು ಬಳಸಬಾರದು ಎಂದು ಭಾರತೀಯ ಚುನಾವಣಾ ಆಯೋಗ ಸೂಚಿಸಿದೆ.

ಮಧ್ಯಂತರ ಆದೇಶದಲ್ಲಿ, ಆಯೋಗದಿಂದ ತಮ್ಮ ಬಣಗಳನ್ನು ಗುರುತಿಸಲು ಬಳಸಬಹುದಾದ ಹೆಸರುಗಳನ್ನು ಇಂದು ಬೆಳಗ್ಗೆ ೧೧ ಗಂಟೆಯೊಳಗೆ ಸಲ್ಲಿಸುವಂತೆ ಎರಡೂ ಬಣಗಳಿಗೆ ಸೂಚಿಸಲಾಗಿದೆ.

ನಾಯಕರಾದ ಮಮತಾ ಬ್ಯಾನರ್ಜಿ ಮತ್ತು ಅರೂಪ್ ರಾಯ್ ನೇತೃತ್ವದ ಪಕ್ಷದ ಎರಡು ಬಣಗಳ ಮುಖಂಡರ ವಾದ ಆಲಿಸಿದ ಬಳಿಕ ಚುನಾವಣಾ ಆಯೋಗ ಈ ಮಧ್ಯಂತರ ಆದೇಶ ಹೊರಡಿಸಿದೆ.

****************

ಆರನೇ ತರಗತಿ ವಿದ್ಯಾರ್ಥಿಗಳಿಗೆ ಕಡ್ಡಾಯ ಮೂರು ಭಾಷಾ ನೀತಿ ಜಾರಿಯನ್ನು ೨೦೨೭ರ ಶೈಕ್ಷಣಿಕ ಸಾಲಿನವರೆಗೆ ಮುಂದೂಡುವ ಬಗ್ಗೆ ಪರಿಶೀಲಿಸುವಂತೆ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್‌ಇಗೆ ನಿನ್ನೆ ಸುಪ್ರೀಂ ಕೋರ್ಟ್ ಸೂಚಿಸಿದೆ.

ವಿದ್ಯಾರ್ಥಿಗಳಿಗೆ ಪರಿವರ್ತನಾ ಅವಧಿಯಲ್ಲಿ ಅನುಕೂಲವಾಗುವಂತೆ ನೀತಿ ಜಾರಿ ಮುಂದೂಡಲು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್‌ಮಾಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ಪೀಠ ಸಲಹೆ ನೀಡಿದೆ.

ಈ ವರ್ಷ ಆರನೇ ತರಗತಿಯಲ್ಲಿ ಮೂರು ಭಾಷೆಗಳನ್ನು ಕಲಿಯಲು ಬಯಸುವ ವಿದ್ಯಾರ್ಥಿಗಳಿಗೆ ಅವಕಾಶ ಮುಂದುವರಿಸುವಂತೆಯೂ ಪೀಠ ತಿಳಿಸಿದೆ.

****************

ಪ್ರಧಾನಮಂತ್ರಿ ನರೇಂದ್ರ ಮೋದಿ, ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ನಡೆಯುತ್ತಿದೆ. ಜನಸೇವೆಯೇ ದೇಶಸೇವೆ ಎಂಬ ಮಂತ್ರದಡಿ ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ ೨೦೪೭ರ ವೇಳೆಗೆ ವಿಕಸಿತ ಭಾರತ ಗುರಿ ಸಾಧನೆಯತ್ತ ಸಾಗುತ್ತಿದೆ. ಎಲ್ಲರನ್ನೊಳಗೊಂಡ ಅಭಿವೃದ್ಧಿ ಮತ್ತು ಸಾಮಾಜಿಕ ಸಬಲೀಕರಣದ ಮೂಲಕ ದೇಶದ ಜನರ ಜೀವನದಲ್ಲಿ ಮಹತ್ವದ ಪರಿವರ್ತನೆಯನ್ನು ತರಲಾಗುತ್ತಿದೆ.

ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ವರದಿಯ ವಿಷಯ ಇಂಡಿಯಾ ಸೆಮಿಕಂಡಕ್ಟರ್ ಮಿಷನ್-೨೦೨೧

೨೦೨೧ ರ ಜಾಗತಿಕ ಚಿಪ್ ಕೊರತೆಯು, ವಾಹನ ಹಾಗೂ ವಿದ್ಯುನ್ಮಾನ ಉತ್ಪಾದನಾ ರಂಗಗಳ ಮೇಲೆ ಭಾರಿ ಪ್ರಭಾವ ಬೀರಿದ ಹಿನ್ನೆಲೆಯಲ್ಲಿ, ಭಾರತ, ವಿದೇಶಿ ಪೂರೈಕೆ ಸರಪಳಿಯ ಮೇಲಿನ ತನ್ನ ಅವಲಂಬನೆಯನ್ನು ತಗ್ಗಿಸಲು ೭೬ ಸಾವಿರ ಕೋಟಿ ರೂಪಾಯಿಗಳ ವೆಚ್ಚದ 'ಸೆಮಿಕಾನ್ ಇಂಡಿಯಾ' ಯೋಜನೆಗೆ ಡಿಸೆಂಬರ್ ೨೧, ೨೦೨೧ ರಂದು ಚಾಲನೆ ನೀಡಿತು.

ಈ ಬೃಹತ್ ಯೋಜನೆಯ ಉಸ್ತುವಾರಿ ಹಾಗೂ ಅನುಷ್ಠಾನಕ್ಕಾಗಿ 'ಇಂಡಿಯಾ ಸೆಮಿಕಂಡಕ್ಟರ್ ಮಿಷನ್' ಅನ್ನು ಸೃಜಿಸಲಾಯಿತು.

ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಸುಮಾರು ೧.೬ ಲಕ್ಷ ಕೋಟಿ ರೂಪಾಯಿ ಮೌಲ್ಯದ ೧೦ ಪ್ರಮುಖ ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಲ್ಲಿ ಎರಡು ಚಿಪ್ ತಯಾರಿಕಾ ಘಟಕಗಳು ಹಾಗೂ ಎಂಟು ಪ್ಯಾಕೇಜಿಂಗ್ ಘಟಕಗಳು ಸೇರಿವೆ.

ಈ ಪೈಕಿ ನಾಲ್ಕು ಘಟಕಗಳಲ್ಲಿ ಈಗಾಗಲೇ ಪ್ರಾಯೋಗಿಕ ಉತ್ಪಾದನೆ ಪ್ರಾರಂಭವಾಗಿದೆ. ಕೈಗಾರಿಕಾ ಸಾಮರ್ಥ್ಯವು ಒಂದೇ ಪ್ರದೇಶಕ್ಕೆ ಸೀಮಿತವಾಗದಂತೆ ಗುಜರಾತ್, ಅಸ್ಸಾಂ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಈ ಘಟಕಗಳನ್ನು ವಿಸ್ತರಿಸಲಾಗುತ್ತಿದ್ದು, ಭಾರತ ತನ್ನ ಸವಾಲನ್ನು ಭವಿಷ್ಯದ ಕೈಗಾರಿಕಾ ಯೋಜನೆಯನ್ನಾಗಿ ಪರಿವರ್ತಿಸಿದೆ.

****************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ೭೬ನೇ ಜನ್ಮದಿನದ ಅಂಗವಾಗಿ ಬಿಜೆಪಿ ನಿನ್ನೆ ದೇಶಾದ್ಯಂತ ಒಂದು ತಿಂಗಳ 'ಸೇವಾ ಸಂಕಲ್ಪ ಅಭಿಯಾನ'ಕ್ಕೆ ಚಾಲನೆ ನೀಡಿದೆ.

ಸಾರ್ವಜನಿಕ ಸೇವೆಗೆ ಪ್ರಧಾನಿ ನರೇಂದ್ರ ಮೋದಿ ಅವರ ಬದ್ಧತೆಯನ್ನು ಬಿಂಬಿಸುವುದು ಹಾಗೂ ವಿಶೇಷವಾಗಿ ಯುವಜನರು ಸೇವಾ ಕಾರ್ಯಗಳಲ್ಲಿ ತೊಡಗಿಕೊಳ್ಳುವಂತೆ ಪ್ರೋತ್ಸಾಹಿಸುವುದು ಅಭಿಯಾನದ ಉದ್ದೇಶವಾಗಿದೆ.

೨೦೦೧ರ ಅಕ್ಟೋಬರ್ ೭ರಂದು ನರೇಂದ್ರ ಮೋದಿ ಅವರು ಗುಜರಾತ್ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿ ೨೫ ವರ್ಷ ಪೂರ್ಣಗೊಳಿಸಿರುವ ಸಂದರ್ಭವೂ ಈ ಅಭಿಯಾನದೊಂದಿಗೆ ಗುರುತಿಸಿಕೊಂಡಿದೆ.

ಅಭಿಯಾನವು ಮುಂದಿನ ತಿಂಗಳ ೧೭ರವರೆಗೆ ನಡೆಯಲಿದೆ.

****************

ವಿಕಸಿತ ಭಾರತ- ಜಿ ರಾಮ್ ಜಿ ಯೋಜನೆಯು ವಿಕಸಿತ ಗ್ರಾಮಗಳ ನಿರ್ಮಾಣಕ್ಕೆ ಹೇಗೆ ಕೊಡುಗೆ ನೀಡಬಹುದು ಎಂಬುದನ್ನು ಪರಿಶೀಲಿಸುವಂತೆ ಕೇಂದ್ರ ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಉದ್ಯೋಗ ಒದಗಿಸುವುದರ ಜೊತೆಗೆ ಗ್ರಾಮೀಣ ಸಮುದಾಯಗಳಿಗೆ ದೀರ್ಘಕಾಲ ಉಪಯುಕ್ತವಾಗುವ ಆಸ್ತಿಗಳನ್ನು ಸೃಷ್ಟಿಸಿ, ಗ್ರಾಮಗಳನ್ನು ಸ್ವಾವಲಂಬಿ ಮತ್ತು ಅಭಿವೃದ್ಧಿಪಡಿಸುವಂತಿರಬೇಕು ಎಂದು ಹೇಳಿದರು.

****************

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ, ೨೦೨೬ರ ಜೂನ್ ತಿಂಗಳ ಯುಜಿಸಿ-ನೆಟ್ ಪರೀಕ್ಷೆಯ ಇಂಗ್ಲಿಷ್, ವಾಣಿಜ್ಯ ಮತ್ತು ಸಮಾಜಶಾಸ್ತ್ರ ವಿಷಯಗಳ ಅಂತಿಮ ಉತ್ತರ ಸೂಚಿಗಳನ್ನು ಬಿಡುಗಡೆ ಮಾಡಿದೆ.

ಅಂತಿಮ ಉತ್ತರ ಕೀಲಿಗಳು ಅಧಿಕೃತ ಜಾಲತಾಣದಲ್ಲಿ ಲಭ್ಯವಿವೆ.

ಪರೀಕ್ಷೆಯನ್ನು ಈ ತಿಂಗಳ ೯ ಮತ್ತು ೧೦ರಂದು ದೇಶದ ೨೬೨ ನಗರಗಳ ೪೫೪ ಕೇಂದ್ರಗಳಲ್ಲಿ ನಡೆಸಲಾಗಿತ್ತು.

****************

ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಪಾಸ್‌ಪೋರ್ಟ್ ನಿಯಮಗಳು-೧೯೮೦ಕ್ಕೆ ತಿದ್ದುಪಡಿ ಮಾಡುವ ೨೦೨೬ರ ಪಾಸ್‌ಪೋರ್ಟ್ ತಿದ್ದುಪಡಿ ನಿಯಮಗಳನ್ನು ಅಧಿಸೂಚನೆ ಮೂಲಕ ಪ್ರಕಟಿಸಿದೆ.

ತಿದ್ದುಪಡಿಯ ಪ್ರಕಾರ, ೧೫ ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ನೀಡಲಾಗುವ ೩೬ ಪುಟಗಳ ಸಾಮಾನ್ಯ ಪಾಸ್‌ಪೋರ್ಟ್‌ನ ಅವಧಿ ಐದು ವರ್ಷಗಳಾಗಿರುತ್ತದೆ ಅಥವಾ ಮಗು ೧೮ ವರ್ಷ ತುಂಬುವವರೆಗೆ ಇರುತ್ತದೆ. ಈ ಎರಡರಲ್ಲಿ ಯಾವುದು ಮೊದಲೋ, ಅದುವರೆಗೆ ಪಾಸ್‌ಪೋರ್ಟ್ ಮಾನ್ಯವಾಗಿರುತ್ತದೆ.

****************

ನವದೆಹಲಿಯಲ್ಲಿ ನಿನ್ನೆ ರಾತ್ರಿ ನಡೆದ ಭಾರತ-ಅಫ್ಘಾನಿಸ್ತಾನ ನಡುವಿನ ಟಿ-೨೦ ಕ್ರಿಕೆಟ್ ಸರಣಿಯ ಮೂರನೇ ಹಾಗೂ ಅಂತಿಮ ಪಂದ್ಯದಲ್ಲಿ ಭಾರತ, ಅಫ್ಘಾನಿಸ್ತಾನ ತಂಡವನ್ನು ೧೨೬ ರನ್‌ಗಳಿಂದ ಸೋಲಿಸಿ ಸರಣಿಯನ್ನು ೩-೦ ಅಂತರದಲ್ಲಿ ಸರಣಿಯನ್ನು ತನ್ನದಾಗಿಸಿಕೊಂಡಿತು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೨೧ ರನ್ ಗಳಿಸಿತು.

೨೨೨ ರನ್‌ಗಳ ಗುರಿ ಬೆನ್ನತ್ತಿದ ಅಫ್ಘಾನಿಸ್ತಾನ ತಂಡ ೧೪.೧ ಓವರ್‌ಗಳಲ್ಲಿ ೯೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು.

********ಮುಕ್ತಾಯ********